# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 11(81) |
| **ಸದಸ್ಯರ ಹೆಸರು** | : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : 04-12-2023. |
| **ಉತ್ತರಿಸುವ ಸಚಿವರು** | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರಿ ನೌಕರರಿಗೆ ಶಿಶುಪಾಲನಾ ರಜೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಆ | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸದರಿ ಆದೇಶದ ರೀತ್ಯಾ ರಜೆ ನೀಡದಿರಲು ಕಾರಣಗಳೇನು; ಸರ್ಕಾರಿ ನೌಕರರಿಗೆ ನೀಡುವ ಶಿಶುಪಾಲನಾ ರಜೆಯ ಆದೇಶವನ್ನು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ವಿಸ್ತರಿಸಲಾಗುವುದು; | ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಇರುವಂತೆ ಶಿಶುಪಾಲನಾ ರಜೆ ಸೌಲಭ್ಯವನ್ನು ವಿಸ್ತರಿಸುವ ಕುರಿತಂತೆ ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಿದೆ. |
| ಇ | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ 2015ರ ನಂತರ ಖಾಲಿ ಆಗಿರುವ ಹುದ್ದೆಗಳನ್ನು ಭರ್ತಿ ಮಾಡಲು ನಿರ್ಬಂಧಿಸಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು; | ಖಾಸಗಿ ಅನುದಾನಿತ ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಖಾಸಗಿ ಅನುದಾನಿತ ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. |
| ಈ | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಕುಂಟುಂಬ ನಿರ್ವಹಣೆ ಸೌಲಭ್ಯ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |

ಇಪಿ 516 ಎಸ್‌ಇಎಸ್ 2023

(ಎಸ್. ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು